# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 49(55)
ಸದಸ್ಯರ ಹೆಸರು : ಶ್ರೀ ಮಧು ಜಿ.ಮಾದೇಗೌಡ(ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 19-12-2022
ಉತ್ತರಿಸುವ ಸಚಿವರು : ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಹಾವೇರಿ ಜಿಲ್ಲೆಯಲ್ಲಿ ನಡೆಯಬೇಕಿದ್ದ 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಮುಂದೂಡಿದ್ದು, ಯಾವ ದಿನಾಂಕಗಳಂದು ನಿಶ್ಚಿತವಾಗಿ ಸಮ್ಮೇಳನ ಆಯೋಜಿಸಲು ಸರ್ಕಾರ ನಿರ್ಧರಿಸಿದೆ; | 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು 2023ನೇ ಸಾಲಿನ ಜನವರಿ 06, 07 ಮತ್ತು 08 ರಂದು ಹಾವೇರಿ ಜಿಲ್ಲೆಯಲ್ಲಿ ಆಯೋಜಿಸಲು ನಿರ್ಧರಿಸಲಾಗಿದೆ. |
| ಆ) | 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸರ್ಕಾರ ಈವರೆವಿಗೂ ಬಿಡುಗಡೆ ಮಾಡಿರುವ ಅನುದಾನ ಎಷ್ಟು; (ದಿನಾಂಕವಾರು ಬಿಡುಗಡೆ ಮಾಡಲಾದ ಅನುದಾನದ ವಿವರ ನೀಡುವುದು) | 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಈವರೆವಿಗೂ ರೂ.20.00ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಮಾಹಿತಿಯನ್ನು ಅನುಬಂಧ-1ರಲ್ಲಿರಿಸಿದೆ |
| ಇ) | ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಂಬಂಧಿಸಿದಂತೆ ಪ್ರಸ್ತುತ ಹಂತದವರೆಗೆ ಯಾವ ಯಾವ ಸಿದ್ಧತೆಗಳನ್ನು ಕೈಗೊಳ್ಳಲಾಗಿದೆ: (ಸಂಪೂರ್ಣ ವಿವರ ನೀಡುವುದು) | ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಂಬಂಧಿಸಿದಂತೆ ಕೈಗೊಂಡಿರುವ ಸಿದ್ಧತೆಗಳ ವಿವರಗಳನ್ನು ಅನುಬಂಧ-2 ರಲ್ಲಿರಿಸಿದೆ. |
| ಈ) | ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಸಂಘಟಿಸಲು ಎಷ್ಟು ವೇದಿಕೆ ಮತ್ತು ಉಪ ಸಮಿತಿಗಳನ್ನು ರಚಿಸಲಾಗುತ್ತಿದೆ: ಎಷ್ಟು ಜನರಿಗೆ ವಸತಿ ಸೌಕರ್ಯ ಹಾಗೂ ಪ್ರತಿದಿನ ಎಷ್ಟು ಜನರಿಗೆ ಊಟದ ವ್ಯವಸ್ಥೆ ಕಲ್ಪಿಸಲಾಗುತ್ತದೆ: | ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ಸಂಘಟಿಸಲು 03 ವೇದಿಕೆಗಳು, 01 ಪ್ರಧಾನ ವೇದಿಕೆ ಹಾಗೂ 02 ಸಮಾನಾಂತರ ವೇದಿಕೆಗಳನ್ನು ರಚಿಸಲಾಗಿರುತ್ತದೆ ಹಾಗೂ ಸುಮಾರು 03 ಲಕ್ಷ ಜನರಿಗೆ ಊಟದ ವ್ಯವಸ್ಥೆ ಕಲ್ಪಿಸಲಾಗುವುದು. |
| ಉ) | ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವಭಾವಿಯಾಗಿ ಸಂಬಂಧಪಟ್ಟ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆದಿರುವ ಸಭೆಗಳೆಷ್ಟು? | ಒಟ್ಟು 08 ಸಭೆಗಳು ನಡೆದಿರುತ್ತದೆ. |

ಸಂಖ್ಯೆ: ಕಸಂವಾ 95 ಕವಿಸ 2022

(ವಿ. ಸುನೀಲ್ ಕುಮಾರ್)
**ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.**

ಅನುಬಂಧ -1

<u>ಕರ್ನಾಟಕ ಸರ್ಕಾರದ ನಡವಳಿಗಳು</u>

ವಿಷಯ: 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಾವೇರಿಯಲ್ಲಿ ಆಯೋಜಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: (1) ಸರ್ಕಾರದ ಆದೇಶ ಸಂಖ್ಯೆ: ಕಸಂವಾ 115 ಕಸಧ 2022, ದಿನಾಂಕ: 09/04/2022

(2) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರ ಪತ್ರ ಸಂ: ಡಿಕೆಸಿ-18011/1/2021, ದಿನಾಂಕ: 22/04/2022.

(3) ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಆಇ 14 ಬಿಆರ್‌ಎಸ್ 2022, ದಿನಾಂಕ:13-05-2022.

****

**ಪ್ರಸ್ತಾವನೆ :-**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ 2022-23ನೇ ಸಾಲಿನ ಆಯವ್ಯಯ ಕಂಡಿಕೆ-311ರಲ್ಲಿ ನಮ್ಮ ನಾಡು ನುಡಿ ಸಂಸ್ಕೃತಿ ಬಿಂಬಿಸಲು ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಾವೇರಿಯಲ್ಲಿ ಆಯೋಜಿಸಲು 2022-23ನೇ ಸಾಲಿನ ಲೆಕ್ಕಶೀರ್ಷಿಕೆ: 2205-00-102-4-22- GIA to Kannada Sahitya Parishath-103-Grants-in-Aids-General ಅಡಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ರೂ. 20.00 ಕೋಟಿಗಳನ್ನು ಭರಿಸಲು ತಾತ್ವಿಕ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ (2)ರ ಪತ್ರದಲ್ಲಿ ಜಿಲ್ಲಾಧಿಕಾರಿ, ಹಾವೇರಿ ಜಿಲ್ಲೆ, ಹಾವೇರಿ ಇವರು 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅಂದಾಜು ವೆಚ್ಚ ರೂ.24.00ಕೋಟಿಗಳಾಗುತ್ತದೆಂದು ತಿಳಿಸುತ್ತಾ, ಆಯವ್ಯಯ ಘೋಷಣೆಯನ್ವಯ ಅನುದಾನ ಬಿಡುಗಡೆಗೊಳಿಸುವಂತೆ ಕೋರಿರುವುದಾಗಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರು ತಿಳಿಸಿರುತ್ತಾರೆ.

ಮುಂದುವರೆದು, ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ-7/2022, ದಿನಾಂಕ:05/04/2022ರಲ್ಲಿ 2022-23ನೇ ಸಾಲಿಗೆ ಕನ್ನಡ ಸಾಹಿತ್ಯ ಪರಿಷತ್ತಿನ ಲೆಕ್ಕಶೀರ್ಷಿಕೆ: 2205-00-102-4-22-103ಯಲ್ಲಿ ಒಟ್ಟು ರೂ.1000.00ಲಕ್ಷಗಳನ್ನು ಕಾಯ್ದಿರಿಸಿದ್ದು, ಸದರಿ ಅನುದಾನದಲ್ಲಿ ಪ್ರತಿ ವರ್ಷದಂತೆ ರೂ.500.00ಲಕ್ಷಗಳು ಕನ್ನಡ ಸಾಹಿತ್ಯ ಪರಿಷತ್ತಿನ ಸಿಬ್ಬಂದಿಗಳ ವೇತನಾನುದಾನಕ್ಕೆ ಹಾಗೂ ಕಾರ್ಯಚಟುವಟಿಕೆಗಳಿಗೆ ಬಿಡುಗಡೆ ಮಾಡಲಾಗುವುದರಿಂದ, ಸದರಿ ಲೆಕ್ಕಶೀರ್ಷಿಕೆಯಲ್ಲಿ ರೂ.500.00ಲಕ್ಷಗಳು ಮಾತ್ರ ಉಳಿಕೆಯಾಗಲಿದ್ದು, ಆಯವ್ಯಯ ಕಂಡಿಕೆಯನ್ವಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಹೆಚ್ಚುವರಿಯಾಗಿ ರೂ.1500.00ಲಕ್ಷಗಳು ಬೇಕಾಗುತ್ತದೆಂದು ತಿಳಿಸುತ್ತಾ, ಹಾವೇರಿಯಲ್ಲಿ ಆಯೋಜಿಸಲಿರುವ 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ 2022-23ನೇ ಸಾಲಿನ ಆಯವ್ಯಯ ಘೋಷಣೆಯಂತೆ ಲೆಕ್ಕಶೀರ್ಷಿಕೆ: 2205-00-102-4-22-103ರಡಿ ಹೆಚ್ಚುವರಿ ಅನುದಾನ ರೂ.1500.00ಲಕ್ಷಗಳನ್ನು ಒದಗಿಸಿ 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಒಟ್ಟು ರೂ.2000.00ಲಕ್ಷಗಳನ್ನು ಜಿಲ್ಲಾಧಿಕಾರಿ, ಹಾವೇರಿ ಜಿಲ್ಲೆ, ಹಾವೇರಿ ಇವರಿಗೆ ಬಿಡುಗಡೆ ಮಾಡಿ ಆದೇಶಿಸುವಂತೆ ನಿರ್ದೇಶಕರು ಕೋರಿರುತ್ತಾರೆ.

ಮೇಲೆ (3)ರಲ್ಲಿ ಓದಲಾದ ಆದೇಶದಲ್ಲಿ, ಆರ್ಥಿಕ ಇಲಾಖೆಯು ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಾವೇರಿಯಲ್ಲಿ ಆಯೋಜಿಸಲು ರೂ.1500.00ಲಕ್ಷಗಳನ್ನು 2022-23ನೇ ಸಾಲಿನ ಲೆಕ್ಕಶೀರ್ಷಿಕೆ:2205-00-102-4-22-103 ಸಹಾಯಾನುಧಾನ-ಸಾಮಾನ್ಯ ಅಡಿ ಹೆಚ್ಚುವರಿಯಾಗಿ ಮಂಜೂರು ಮಾಡಿದ್ದು, ಸದರಿ ಹೆಚ್ಚುವರಿ ಅನುದಾನವನ್ನು 2022-23ನೇ ಸಾಲಿನ ಪೂರಕ ಅಂದಾಜುಗಳು 1ನೇ ಕಂತಿನಲ್ಲಿ ಒದಗಿಸುವ ಮೂಲಕ ಕ್ರಮಬದ್ಧಗೊಳಿಸಲಾಗುವುದೆಂದು ತಿಳಿಸಿದೆ.

......2

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 115 ಕಸಧ 2022, ಬೆಂಗಳೂರು, ದಿನಾಂಕ: 26-05-2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-311 ರನ್ವಯ "**ನಮ್ಮ ನಾಡು ನುಡಿ ಸಂಸ್ಕೃತಿ ಬಿಂಬಿಸಲು ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಹಾವೇರಿಯಲ್ಲಿ ಆಯೋಜಿಸಲು**" 2022-23ನೇ ಸಾಲಿನ ಲೆಕ್ಕಶೀರ್ಷಿಕೆ:2205-00-102-4-22-103ರಡಿ ಪ್ರಸ್ತುತ ಲಭ್ಯವಿರುವ ರೂ.5.00(ಐದು ಕೋಟಿ ರೂಪಾಯಿಗಳು ಮಾತ್ರ) ಗಳು ಮತ್ತು ಹೆಚ್ಚುವರಿಯಾಗಿ ಒದಗಿಸಿರುವ ಅನುದಾನ ರೂ.15.00ಕೋಟಿ (ಹದಿನೈದು ಕೋಟಿ ರೂಪಾಯಿಗಳು ಮಾತ್ರ) ಗಳು, ಹೀಗೆ ಒಟ್ಟಾರೆ ರೂ.20.00ಕೋಟಿ (ಇಪ್ಪತ್ತು ಕೋಟಿ ರೂಪಾಯಿಗಳು ಮಾತ್ರ)ಗಳನ್ನು ಜಿಲ್ಲಾಧಿಕಾರಿ, ಹಾವೇರಿ ಜಿಲ್ಲೆ, ಹಾವೇರಿ ಇವರಿಗೆ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಮುಖಾಂತರ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆಗೊಳಿಸಿದೆ.

**ಷರತ್ತುಗಳು:**

1. ಯಾವ ಉದ್ದೇಶಕ್ಕೆ ಅನುದಾನ ಮಂಜೂರು ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
2. ಹಂಚಿಕೆ ಮಾಡಿರುವ ಅನುದಾನದ ಮಿತಿಯಲ್ಲಿ ಯೋಜನೆ ರೂಪಿಸಿಕೊಳ್ಳತಕ್ಕದ್ದು.
3. ಹೆಚ್ಚುವರಿ ಅನುದಾನ ರೂ.15.00 ಕೋಟಿಗಳನ್ನು 2022-23ನೇ ಸಾಲಿನ ಪೂರಕ ಅಂದಾಜುಗಳು 1ನೇ ಕಂತಿನಲ್ಲಿ ಒದಗಿಸುವ ಮೂಲಕ ಕ್ರಮಬದ್ಧಗೊಳಿಸಲಾಗುವುದು.
4. ಅಂದಾಜು ವೆಚ್ಚ ಮತ್ತು ಸಂಬಂಧಪಟ್ಟ ದಾಖಲಾತಿಗಳನ್ನು ಪಡೆದು ಪರಿಶೀಲಿಸಿ ಸರ್ಕಾರಕ್ಕೆ ಸಲ್ಲಿಸುವುದು.
5. ಮಂಜೂರು ಮಾಡಿದ ಹಣ ಸಮರ್ಪಕವಾಗಿ ಬಳಕೆಯಾದ ಬಗ್ಗೆ ಲೆಕ್ಕಪರಿಶೋಧಕರಿಂದ ದೃಢೀಕರಿಸಿದ ಲೆಕ್ಕಪಟ್ಟಿ ಹಾಗೂ ಹಣಬಳಕೆ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.
6. ಈ ವೆಚ್ಚವನ್ನು ಇಲಾಖೆಗೆ ಒದಗಿಸಿರುವ ಅನುದಾನದ ಮಿತಿಯೊಳಗೆ ಈ ಯೋಜನೆಯನ್ನು ಕಾರ್ಯಗತಗೊಳಿಸುವಂತೆ ತಿಳಿಸಿದೆ.
7. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಹಾಗೂ ನಿಯಮ-2000 ನಿಯಮ ಮತ್ತು ಸರ್ಕಾರ ಆಗಿಂದಾಗ್ಗೆ ಹೊರಡಿಸಿದ ಸುತ್ತೋಲೆಗಳಲ್ಲಿ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಆಇ 14 ಬಿಆರ್‌ಎಸ್ 2022, ದಿನಾಂಕ: 13.05.2022ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2022, ದಿನಾಂಕ: 04-04-2022ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ. ಆರ್. ರಮೇಶ್ 26/05/2022
**(ಕೆ.ಆರ್. ರಮೇಶ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿಇಲಾಖೆ,
(ಸಂಸ್ಕೃತಿ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ) ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.

.....3

2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
3. ಜಿಲ್ಲಾಧಿಕಾರಿ, ಹಾವೇರಿ ಜಿಲ್ಲೆ, ಹಾವೇರಿ (ನಿರ್ದೇಶಕರ ಮುಖಾಂತರ).
4. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು.
5. ಖಜಾನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ನಿರ್ದೇಶಕರು, (ಜನಶಕ್ತಿ ಮತ್ತು ಉದ್ಯೋಗ ವಿಭಾಗ), ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7&8) ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

## ಅನುಬಂಧ-2

### ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳ ಪ್ರಸ್ತುತ ಹಂತದಲ್ಲಿನ ಪೂರ್ವ ಸಿದ್ಧತೆಗಳ ವಿವರ

1. 86ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳವನ್ನು ಹಾವೇರಿಯಲ್ಲಿ 2023 ಜನವರಿ 06,07 ಮತ್ತು 08 ರಂದು ಹಮ್ಮಿಕೊಳ್ಳಲಾಗಿದ್ದು, ಸದರಿ ಸಮ್ಮೇಳನದ ಯಶಸ್ವಿಗಾಗಿ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಸಚಿವರು, ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ವಿವಿಧ ಒಟ್ಟು ಉಪ ಸಮಿತಿಗಳನ್ನು ರಚಿಸಲಾಗಿರುತ್ತದೆ.

2. 12.10.2022 ರಂದು ಮಾನ್ಯ ಕಾರ್ಮಿಕ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಅಧ್ಯಕ್ಷತೆಯಲ್ಲಿ ಸಮ್ಮೇಳನದ ಪೂರ್ವಭಾವಿ ಸಭೆಯನ್ನು ವಿಧಾನಸೌಧ ಬೆಂಗಳೂರಿನಲ್ಲಿ ನಡೆಸಲಾಗಿದೆ. ಸದರಿ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಾನ್ಯ ಸಚಿವರು ಹಾಗೂ ಹಾವೇರಿ ವಿಧಾನಸಭಾ ಕ್ಷೇತ್ರ, ಬ್ಯಾಡಗಿ ವಿಧಾನಸಭಾ ಕ್ಷೇತ್ರ, ರಾಣೆಬೆನ್ನೂರು ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರುಗಳು ಪಾಲ್ಗೊಂಡಿದ್ದರು. ಅಲ್ಲದೇ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಸಭೆಯಲ್ಲಿ ಪಾಲ್ಗೊಂಡಿದ್ದರು. ಸಮ್ಮೇಳನದ ಯಶಸ್ಸಿನ ಬಗ್ಗೆ ಚರ್ಚಿಸಲಾಯಿತು.

3. 29.10.2022 ರಂದು ಮಾನ್ಯ ಕಾರ್ಮಿಕ ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಅಧ್ಯಕ್ಷತೆಯಲ್ಲಿ ಸಮ್ಮೇಳನದ ಪೂರ್ವಭಾವಿ ಸಭೆಯನ್ನು ವಿಧಾನಸೌಧ ಬೆಂಗಳೂರಿನಲ್ಲಿ ನಡೆಸಲಾಗಿದೆ. ಸದರಿ ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಾನ್ಯ ಸಚಿವರು ಹಾಗೂ ಹಾವೇರಿ ವಿಧಾನಸಭಾ ಕ್ಷೇತ್ರ, ಬ್ಯಾಡಗಿ ವಿಧಾನಸಭಾ ಕ್ಷೇತ್ರ, ರಾಣೆಬೆನ್ನೂರು ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರುಗಳು ಪಾಲ್ಗೊಂಡಿದ್ದರು. ಅಲ್ಲದೇ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಸಭೆಯಲ್ಲಿ ಪಾಲ್ಗೊಂಡಿದ್ದರು. ಸಮ್ಮೇಳನದ ಯಶಸ್ಸಿನ ಬಗ್ಗೆ ಚರ್ಚಿಸಲಾಯಿತು.

4. 01.11.2022 ರಂದು ಮಾನ್ಯ ಶ್ರೀ ಶಿವರಾಂ ಹೆಬ್ಬಾರ್ ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳು, ಹಾವೇರಿಯಲ್ಲಿ ಸಭೆ ನಡೆಸಲಾಗಿದೆ.

5. ದಿ:21.11.2022ರಂದು ಮಾನ್ಯ ಶ್ರೀ ವಿ. ಸುನಿಲ್ ಕುಮಾರ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರ ಅಧ್ಯಕ್ಷತೆಯಲ್ಲಿ ವಿಧಾನಸೌಧ ಬೆಂಗಳೂರಿನಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಲಾಗಿದೆ.

6. ದಿ:24.11.2022ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಸಭೆಯನ್ನು ನಡೆಸಲಾಗಿದೆ.

7. ದಿ:27.11.2022ರಂದು ಮಾನ್ಯ ಶ್ರೀ ಶಿವರಾಂ ಹೆಬ್ಬಾರ್ ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳು, ಹಾವೇರಿಯಲ್ಲಿ ವಿವಿಧ ಉಪ ಸಮಿತಿಗಳ ಸರ್ವ ಸದಸ್ಯರ ಸಭೆ ನಡೆಸಲಾಗಿದೆ.

8. ದಿ:28.11.2022ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆ ನಡೆಸಲಾಗಿದೆ.

ಮೇಲಿನ ಸಭೆಗಳಲ್ಲಿ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಯಾಗಿ ನಡೆಸಲು ಬೇಕಾಗಿರುವ ಮೂಲಭೂತ ಸೌಕರ್ಯ, ಸ್ಥಳಗಳ ಕುರಿತು ಸಮ್ಮೇಳನಕ್ಕೆ ಆಗಮಿಸುವ ಸಾಹಿತಿ, ಕಲಾವಿದರು, ಸಾರ್ವಜನಿಕರಿಗೆ ಯಾವುದೇ ಅನಾನುಕೂಲವಾಗದಂತೆ ವ್ಯವಸ್ಥೆಗಳನ್ನು ಮಾಡುವ ಬಗ್ಗೆ ಚರ್ಚಿಸಲಾಗಿದೆ. ಅಲ್ಲದೇ, ಸಾಹಿತ್ಯಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳ ಕುರಿತು, ಸಾರಿಗೆ, ಊಟದ ವ್ಯವಸ್ಥೆ, ವಸತಿ, ವೇದಿಕೆ, ಮೆರವಣಿಗೆ ಮುಂತಾದವುಗಳ ಬಗ್ಗೆ ಚರ್ಚಿಸಲಾಗಿದೆ.